# ಪ್ರವಾದಿ ಯೊವೇಲನ ಗ್ರಂಥ

## ಮುನ್ನುಡಿ

ಪ್ರವಾದಿ ಯೊವೇಲನ ಕಾಲ ಮತ್ತು ಜೀವನವನ್ನು ಕುರಿತು ನಮಗೆ ಸಾಕಷ್ಟು ಮಾಹಿತಿ ದೊರಕಿಲ್ಲ. ಕ್ರಿ. ಪೂ. ನಾಲ್ಕು ಅಥವಾ ಐದನೇ ಶತಮಾನದಲ್ಲಿ ಪರ್ಷಿಯನ್ನರು ಜುದೇಯ ನಾಡನ್ನು ಆಳುತ್ತಿದ್ದಾಗ ಈ ಗ್ರಂಥ ಉಗಮವಾಗಿರಬಹುದೆಂಬುದು ಕೆಲವರ ಅಭಿಪ್ರಾಯ. ಪಾಲೆಸ್ಟೀನ್ ನಾಡಿನಲ್ಲಿ ಮಿಡತೆಗಳ ಭೀಕರ ಹಾವಳಿ ಹಾಗೂ ಘೋರಕ್ಷಾಮ ತಲೆದೋರಲಿವೆಯೆಂದು ಯೊವೇಲನು ಮುಂತಿಳಿಸುತ್ತಾನೆ. ಈ ಅನಾಹುತ ಸರ್ವೇಶ್ವರನ ಮಹಾದಿನದ ಮುನ್ಸೂಚನೆ ಮತ್ತು ಅನೀತಿವಂತರಿಗೆ ಬರಲಿರುವ ದಂಡನೆಯ ಕುರುಹು ಎಂದು ಅರುಹಿಸುತ್ತಾನೆ.

ಜನರು ತಮ್ಮ ಪಾಪಗಳಿಗಾಗಿ ಪಶ್ಚಾತ್ತಾಪಪಟ್ಟು, ದೇವರಾದ ಸರ್ವೇಶ್ವರಸ್ವಾಮಿಗೆ ಶರಣರಾಗಬೇಕು. ಸೂಕ್ತಕಾಲದಲ್ಲಿ ದೇವರು ಎಲ್ಲಾ ಮಾನವರ ಮೇಲೆ ತಮ್ಮ ಪವಿತ್ರಾತ್ಮರನ್ನು ಸುರಿಸಿ ಆಶೀರ್ವಾದ ಮಾಡುವರು ಎಂಬುದು ಈ ಗ್ರಂಥದ ಮುಖ್ಯಾಂಶ.

## ಪರಿವಿಡಿ

| | | | | | |
|---|---|---|---|---|---|
| 1. | ಮಿಡತೆಗಳ ಹಾವಳಿ | – | 1.01 | – | 2.17 |
| 2. | ಜೀವೋದ್ಧಾರದ ವಾಗ್ದಾನ | – | 2.18 | – | 2.27 |
| 3. | ಸರ್ವೇಶ್ವರನ ದಿನ | – | 2.28 | – | 3.21 |

**1** ಪೆತುವೇಲನ ಮಗನಾದ ಯೊವೇಲನಿಗೆ ಸರ್ವೇಶ್ವರಸ್ವಾಮಿಯಿಂದ ಬಂದ ವಾಣಿ:

### ಮಿಡತೆಗಳ ಹಾವಳಿ – ಬೆಳೆಗಳ ವಿನಾಶ

2 ವೃದ್ಧರೇ ಕೇಳಿ: ನಾಡಿನ ನಿವಾಸಿಗಳೇ ಕಿವಿಗೊಡಿ. ನಿಮ್ಮ ಕಾಲದಲ್ಲಾಗಲೀ ನಿಮ್ಮ ಪೂರ್ವಿಕರ
ಕಾಲದಲ್ಲಾಗಲೀ, ಇಂಥ ದುರ್ಘಟನೆ ಸಂಭವಿಸಿದ್ದುಂಟೇ? 3ಇದನ್ನು ನಿಮ್ಮ ಮಕ್ಕಳಿಗೆ ತಿಳಿಸಿರಿ; ಅವರು
ತಮ್ಮ ಮಕ್ಕಳಿಗೆ ತಿಳಿಸಲಿ; ಅವರ ಮಕ್ಕಳು ಮುಂದಿನ ತಲೆಮಾರಿಗೆ ತಿಳಿಸಲಿ.
4 ಚೂರಿಮಿಡತೆ ತಿಂದು ಉಳಿದಿದ್ದ ಬೆಳೆಯನ್ನು ಗುಂಪುಮಿಡತೆ ತಿಂದುಬಿಟ್ಟಿತು. ಗುಂಪುಮಿಡತೆ
ತಿಂದುಬಿಟ್ಟಿದ್ದನ್ನು ಕುದುರೆಮಿಡತೆ ತಿಂದುಬಿಟ್ಟಿತು; ಕುದುರೆಮಿಡತೆ ಬಿಟ್ಟದ್ದನ್ನು ಕಂಬಳಿ ಮಿಡತೆ
ತಿಂದುಬಿಟ್ಟಿತು. 5ಅಮಲೇರಿದವರೇ, ಎಚ್ಚರಗೊಳ್ಳಿ; ಅತ್ತು ಪ್ರಲಾಪಿಸಿರಿ; ಕುಡುಕರೇ, ರೋದಿಸಿರಿ. ದ್ರಾಕ್ಷಾಬಳ್ಳಿ
ನಾಶವಾಗಿದೆ; ಇನ್ನು ದ್ರಾಕ್ಷಾರಸ ದೊರಕದು.
6 ಶತ್ರುರಾಷ್ಟ್ರ ನನ್ನ ನಾಡನ್ನು ಆಕ್ರಮಿಸಿದೆ. ಆ ರಾಷ್ಟ್ರ ಪ್ರಬಲವಾದುದು; ಅದರ ಸೈನ್ಯ
ಅಸಂಖ್ಯಾತವಾದುದು; ಅದರ ಹಲ್ಲುಗಳು ಸಿಂಹದ ಹಲ್ಲುಗಳು; ಅದರ ಕೋರೆಗಳು ಮೃಗರಾಜನ
ಕೋರೆಗಳು. 7ಅದು ನನ್ನ ದ್ರಾಕ್ಷಾತೋಟವನ್ನು ಹಾಳುಮಾಡಿದೆ; ನನ್ನ ಅಂಜೂರದ ಗಿಡವನ್ನು ಸೀಳಿಹಾಕಿದೆ;
ಅದರ ತೊಗಟೆಗಳನ್ನು ಸುಲಿದು ಬಿಸಾಡಿಬಿಟ್ಟಿದೆ; ಅದರ ರೆಂಬೆಗಳು ಬಿಳಿಚಿಕೊಂಡಿವೆ. 8ಮದುವೆಯಾಗಲಿದ್ದ
ಯುವಕನನ್ನು ಕಳೆದುಕೊಂಡದ್ದಕ್ಕಾಗಿ ಗೋಣಿತಟ್ಟನ್ನು ಉಟ್ಟು ಗೋಳಾಡುವ ಯುವತಿಯಂತೆ ರೋದಿಸಿರಿ.
9ಸರ್ವೇಶ್ವರಸ್ವಾಮಿಯ ಆಲಯದಲ್ಲಿ ಧಾನ್ಯಪಾನ ನೈವೇದ್ಯಗಳು ನಿಂತುಹೋಗಿವೆ. ಆ ಸ್ವಾಮಿಯ

ಪರಿಚಾರಕರಾದ ಯಾಜಕರು ದುಃಖಿತಪ್ತರಾಗಿದ್ದಾರೆ. 10ಹೊಲಗದ್ದೆಗಳು ಹಾಳಾಗಿವೆ; ಧರೆ ದುಃಖಿಸುತ್ತಿದೆ; ಬಿತ್ತಿದ ದವಸಧಾನ್ಯ ಮಣ್ಣು ಪಾಲಾಗಿದೆ; ದ್ರಾಕ್ಷಿಹಣ್ಣು ಒಣಗಿಹೋಗಿದೆ; ಎಣ್ಣೆ ಮರಗಳು ಬಾಡಿಹೋಗಿವೆ.

11 ರೈತರೇ, ರೋದಿಸಿರಿ; ತೋಟಗಾರರೇ, ಪರಿತಪಿಸಿರಿ; ಗೋದಿಯೂ ಜವೆಗೋದಿಯೂ ಹಾಳಾಗಿವೆ; ಹೊಲದ ಬೆಳೆ ನಾಶವಾಗಿದೆ. 12ದ್ರಾಕ್ಷಾಲತೆ ಒಣಗಿದೆ; ಅಂಜೂರದ ಗಿಡ ಬಾಡಿಹೋಗಿದೆ; ದಾಳಿಂಬೆ, ಖರ್ಜೂರ, ಸೇಬು ಮುಂತಾದ ಫಲವೃಕ್ಷಗಳು ಒಣಗಿ ಬೆಂಡಾಗಿವೆ. ನರಮಾನವರು ಸೊರಗಿ ಸಂತೋಷವಿಲ್ಲದೆ ಸಪ್ಪೆಯಾಗಿದ್ದಾರೆ.

**ಮನಃಪರಿವರ್ತನೆಗೆ ಕರೆ**

13 ಯಾಜಕರೇ, ಗೋಣಿತಟ್ಟನ್ನುಟ್ಟು ರೋದಿಸಿರಿ; ಬಲಿಪೀಠದ ಪರಿಚಾರಕರೇ, ಪ್ರಲಾಪಿಸಿರಿ; ದೇವರ ದಾಸರೇ, ಬನ್ನಿ; ಗೋಣಿತಟ್ಟನ್ನುಟ್ಟು ಜಾಗರಣೆ ಮಾಡಿರಿ. ದೇವರ ಆಲಯದಲ್ಲಿ ಧಾನ್ಯಪಾನ ನೈವೇದ್ಯಗಳು ನಿಂತುಹೋಗಿವೆ.

14 ಉಪವಾಸ ವ್ರತವನ್ನು ಕೈಗೊಂಡು ಮಹಾಸಭೆಯನ್ನು ಕರೆಯಿರಿ; ಹಿರಿಯರನ್ನೂ ನಾಡಿನ ಜನಸಾಮಾನ್ಯರನ್ನೂ ಸೇರಿಸಿರಿ; ದೇವರಾದ ಸರ್ವೇಶ್ವರಸ್ವಾಮಿಯ ಆಲಯಕ್ಕೆ ಬರಮಾಡಿರಿ; ಆ ಸ್ವಾಮಿಗೆ ಪ್ರಾರ್ಥನೆಮಾಡಿರಿ.

15 ಸರ್ವೇಶ್ವರಸ್ವಾಮಿಯ ದಿನ ಸಮೀಪಿಸಿದೆ. ಆ ದಿನ ಸರ್ವಶಕ್ತನಿಂದ ವಿನಾಶವನ್ನು ತರಲಿದೆ; ಎಂಥಾ ಭಯಂಕರ ದಿನವದು !

16 ದವಸಧಾನ್ಯಗಳ ವಿನಾಶವನ್ನು ಕಣ್ಣಾರೆ ಕಾಣುತ್ತಿದ್ದೇವಲ್ಲವೆ? ದೇವಾಲಯದ ಹರ್ಷ ಉತ್ಸವಗಳು ನಿಂತುಹೋಗಿವೆ. 17ಬೀಜಗಳು ಹೆಂಟೆಗಳ ಅಡಿಯಲ್ಲೇ ಒಣಗುತ್ತಿವೆ; ಉಗ್ರಾಣಗಳು ಬರಿದಾಗಿವೆ; ದವಸಧಾನ್ಯದ ಕೊರತೆಯಿಂದ ಕಣಜಗಳು ಕುಸಿದುಬಿದ್ದಿವೆ. 18ಪಶುಪ್ರಾಣಿಗಳು ನರಳುತ್ತಿವೆ; ದನಕರುಗಳು ಮೇವಿಲ್ಲದೆ ಕಂಗಾಲಾಗಿವೆ; ಕುರಿಮಂದೆಗಳು ಕೂಡ ಕಂಗೆಟ್ಟಿವೆ. 19ಸರ್ವೇಶ್ವರಾ, ನಿನಗೆ ಮೊರೆಯಿಡುತ್ತೇನೆ. ಹುಲ್ಲುಗಾವಲನ್ನು ಕಾಳ್ಗಿಚ್ಚು ದಹಿಸಿಬಿಟ್ಟಿದೆ; ವನವೃಕ್ಷಗಳೆಲ್ಲ ಬೆಂಕಿಪಾಲಾಗಿವೆ. 20ಕಾಡುಮೃಗಗಳು ನಿನ್ನ ಕಡೆಗೆ ತಲೆಯೆತ್ತಿವೆ; ಹಳ್ಳಕೊಳ್ಳಗಳು ಬತ್ತಿಹೋಗಿವೆ; ಹುಲ್ಲುಗಾವಲನ್ನು ಕಾಳ್ಗಿಚ್ಚು ದಹಿಸಿಬಿಟ್ಟಿದೆ.

**ಸರ್ವೇಶ್ವರಸ್ವಾಮಿಯ ದಿನದ ಮುನ್ಸೂಚನೆ**

**2** ಸಿಯೋನಿನಲ್ಲಿ ಕೊಂಬೂದಿರಿ; ನನ್ನ ಪರಿಶುದ್ಧ ಪರ್ವತದಲ್ಲಿ ಎಚ್ಚರಿಕೆಯ ವಾಣಿ ಮೊಳಗಲಿ; ಸಮಸ್ತ ದೇಶನಿವಾಸಿಗಳು ಹೆದರಿ ನಡುಗಲಿ, ಸರ್ವೇಶ್ವರಸ್ವಾಮಿಯ ದಿನ ಬರಲಿದೆ, ಸನ್ನಿಹಿತವಾಗಿದೆ. 2ಅದು ಕಾರಿರುಳಿನ ಕರಾಳ ದಿನ, ಕಾರ್ಮುಗಿಲ ಕಾರ್ಗತ್ತಲ ದಿನ. ಮುಂಬೆಳಕು ಗುಡ್ಡದಿಂದ ಗುಡ್ಡಕ್ಕೆ ಹರಡುವಂತೆ ಪ್ರಬಲವಾದ ದೊಡ್ಡ ಸೈನ್ಯವೊಂದು ಬರುತ್ತಿದೆ; ಇಂಥ ಸೈನ್ಯ ಹಿಂದೆಂದೂ ಬಂದಿಲ್ಲ, ತಲತಲಾಂತರಕ್ಕೂ ಬರುವಂತಿಲ್ಲ.

3 ಅದರ ಮುಂದೆ ಕಬಳಿಸುವ ಬೆಂಕಿ; ಅದರ ಹಿಂದೆ ಧಗಧಗಿಸುವ ಜ್ವಾಲೆ. ಅದು ಬರುವ ಮುನ್ನ ನಾಡು ಏದೆನ್ ಉದ್ಯಾನವನ; ಅದು ದಾಟಿದ ನಂತರ ಸುಡುಗಾಡು. ಅದರ ಆಪತ್ತಿನಿಂದ ಯಾರೂ ತಪ್ಪಿಸಿಕೊಳ್ಳುವಂತಿಲ್ಲ. 4ಅವು ಕುದುರೆಗಳಂತೆ ಕಾಣಿಸಿಕೊಳ್ಳುತ್ತವೆ; ಸಮರದ ಸವಾರರಂತೆ ಓಡಾಡುತ್ತವೆ. 5ಬೆಟ್ಟಗಳ ತುತ್ತ ತುದಿಯಲ್ಲಿ ಹಾರಾಡುತ್ತವೆ; ರಥಗಳಂತೆ ಚೀತ್ಕಾರ ಮಾಡುತ್ತವೆ; ಕೂಳೆಸುಡುವ ಬೆಂಕಿಯಂತೆ ಚಟಪಟ ಮಾಡುತ್ತವೆ; ಸಮರಕ್ಕೆ ಸಿದ್ಧವಾದ ಶೂರರ ಸೈನ್ಯದಂತಿವೆ. 6ಅವುಗಳ ನೋಟ, ರಾಷ್ಟ್ರಗಳಿಗೆ ಪ್ರಾಣಸಂಕಟ; ಎಲ್ಲರ ಮುಖಗಳಿಗೆ ಮಂಕಾಟ. 7ಅವು ಶೂರರಂತೆ ಹೋರಾಡುತ್ತವೆ, ಯೋಧರಂತೆ ಗೋಡೆಗಳನ್ನೇರುತ್ತವೆ, ಸಾಲು ಸಾಲಾಗಿ ನಡೆದು, ಕ್ರಮತಪ್ಪದೆ ಸಾಗುತ್ತವೆ. 8ನೂಕುನುಗ್ಗಲಿಲ್ಲದೆ, ಸಾಲುಸಾಲಾಗಿ ನಡೆಯುತ್ತವೆ, ಸಾಲುಗಳನ್ನು ಒಡೆಯದೆ ಆಯುಧಗಳ ನಡುವೆ ನುಗ್ಗುತ್ತವೆ. 9ಪಟ್ಟಣಗಳ ಮೇಲೆ ಹಾರಾಡುತ್ತವೆ, ಗೋಡೆಗಳ ಮೇಲೆ ಓಡಾಡುತ್ತವೆ, ಮನೆಗಳನ್ನು ಹತ್ತಿ, ಕಳ್ಳರಂತೆ ಕಿಟಕಿಗಳಲ್ಲಿ ನುಗ್ಗುತ್ತವೆ.

10 ಅವುಗಳ ಮುಂದೆ ಭೂಮಂಡಲ ಕಂಪಿಸುತ್ತದೆ. ಆಕಾಶಮಂಡಲ ನಡುಗುತ್ತದೆ.
ಸೂರ್ಯಚಂದ್ರಗಳು ಮಂಕಾಗುತ್ತವೆ, ನಕ್ಷತ್ರಗಳು ಕಾಂತಿಗುಂದುತ್ತವೆ. 11ಸರ್ವೇಶ್ವರ ಗರ್ಜಿಸಿ ತಮ್ಮ ಸೈನ್ಯಕ್ಕೆ
ಆಜ್ಞಾಪಿಸುತ್ತಾರೆ. ಅವರ ಸೈನ್ಯ ದೊಡ್ಡದು. ಅವರ ಆಜ್ಞೆಯನ್ನು ಪಾಲಿಸುವವನು ಬಲಾಢ್ಯನು. ಸರ್ವೇಶ್ವರ
ಸ್ವಾಮಿಯ ದಿನ ಮಹತ್ತರ; ಅತಿ ಭಯಂಕರ; ಅದರೆದುರಿಗೆ ನಿಲ್ಲಲು ಯಾರಿಗಿದೆ ಧೈರ್ಯ?

**ಪಶ್ಚಾತ್ತಾಪಕ್ಕೆ ಕರೆ**

12 ಸರ್ವೇಶ್ವರ ಇಂತೆನ್ನುತ್ತಾರೆ: "ಈಗಲಾದರೂ ಮನಃಪೂರ್ವಕವಾಗಿ ನನ್ನ ಕಡೆಗೆ ತಿರುಗಿಕೊಳ್ಳಿ.
ಉಪವಾಸ ಕೈಗೊಂಡು, ಅತ್ತು ಗೋಳಾಡಿ." 13ನಿಮ್ಮ ಉಡುಪುಗಳನ್ನು ಅಲ್ಲ, ಹೃದಯಗಳನ್ನು ಸೀಳಿರಿ:
ನಿಮ್ಮ ದೇವರಾದ ಸರ್ವೇಶ್ವರಸ್ವಾಮಿಯ ಕಡೆಗೆ ತಿರುಗಿಕೊಳ್ಳಿ; ಅವರು ದಯಾವಂತರು, ಕರುಣಾಮೂರ್ತಿ,
ಸಹನಶೀಲ, ಪ್ರೀತಿಮಯ. ವಿಧಿಸಬೇಕಾಗಿದ್ದ ದಂಡನೆಗಾಗಿ ಮನನೊಂದುಕೊಳ್ಳುವಂಥವರು. 14ಒಂದು
ವೇಳೆ ಸರ್ವೇಶ್ವರ ತಮ್ಮ ಮನಸ್ಸನ್ನು ಬದಲಾಯಿಸಬಹುದು. ನಿಮ್ಮ ಕಡೆಗೆ ತಿರುಗಿ ನಿಮ್ಮನ್ನು
ಆಶೀರ್ವದಿಸಬಹುದು; ನಿಮ್ಮ ದೇವರಾದ ಅವರಿಗೆ ಅರ್ಪಿಸಲು ಬೇಕಾದ ನೈವೇದ್ಯಗಳನ್ನು ಧಾರಾಳವಾಗಿ
ಅನುಗ್ರಹಿಸಬಹುದು. 15ಸಿಯೋನ್ ಶಿಖರದ ಮೇಲೆ ನಿಂತು ಕೊಂಬೂದಿರಿ. ಉಪವಾಸ ದಿನವನ್ನು
ಘೋಷಿಸಿರಿ. ಮಹಾಸಭೆಯನ್ನು ಕರೆಯಿರಿ. 16ಜನರನ್ನು ಒಟ್ಟುಗೂಡಿಸಿರಿ; ಸಭೆಯನ್ನು ಏರ್ಪಡಿಸಿರಿ;
ವೃದ್ಧರನ್ನು, ಮಕ್ಕಳನ್ನು, ಮೊಲೆಗೂಸುಗಳನ್ನು ಕರೆತನ್ನಿರಿ. ವಧೂವರರು ತಮ್ಮ ಕಲ್ಯಾಣಗೃಹದಿಂದ
ಹೊರಟುಬರಲಿ. 17ಸರ್ವೇಶ್ವರಸ್ವಾಮಿಯ ಪರಿಚಾರಕರಾದ ಯಾಜಕರು ದೇವಾಲಯದ ದ್ವಾರ ಮಂಟಪಕ್ಕೂ
ಬಲಿಪೀಠಕ್ಕೂ ನಡುವೆ ಶೋಕತಪ್ತರಾಗಿ ಹೀಗೆಂದು ಪ್ರಾರ್ಥಿಸಲಿ:

"ಕರುಣೆ ತೋರು, ಹೇ ಸರ್ವೇಶ್ವರಾ, ನಿನ್ನ
 ಪ್ರಜೆಗೆ
ನಿಂದೆಯಾಗದಿರಲಿ ನಿನ್ನ ಸ್ವಂತ ಜನತೆಗೆ
ಗುರಿಯಾಗದಿರಲಿ ಅವರು ಅನ್ಯರ ತಾತ್ಸಾರಕೆ
'ನಿಮ್ಮ ದೇವನೆಲ್ಲಿ?' ಎಂಬ ಪರಕೀಯರ
 ಹೀಯಾಳಿಕೆಗೆ"

**ಸುಭಿಕ್ಷೆಯ ವಾಗ್ದಾನ**

18 ಆಗ ಸರ್ವೇಶ್ವರ ತಮ್ಮ ದೇಶದ ಮೇಲೆ ಅಭಿಮಾನಗೊಂಡು, ತಮ್ಮ ಜನರಿಗೆ ಕರುಣೆ ತೋರಿ
ಹೀಗೆಂದರು:

19 "ನಿಮಗೆ ಧಾನ್ಯ, ದ್ರಾಕ್ಷಾರಸ, ತೈಲಗಳನ್ನು ಅನುಗ್ರಹಿಸುವೆನು; ನೀವು ಸಂತೃಪ್ತರಾಗುವಿರಿ;
ನಿಮ್ಮನ್ನೆಂದಿಗೂ ಅನ್ಯಜನರ ನಿಂದೆಗೆ ಗುರಿಮಾಡೆನು.

20 "ಉತ್ತರದಿಂದ ಬಂದ ಮಿಡತೆಗಳ ಸೈನ್ಯವನ್ನು ನಿಮ್ಮಿಂದ ತೊಲಗಿಸುವೆನು; ಹಾಳುಬಿದ್ದ
ಬಂಜರು ಭೂಮಿಗೆ ಅದನ್ನು ಓಡಿಸುವೆನು. ಅದರ ಮುಂಭಾಗವನ್ನು ಪೂರ್ವದ ಸಮುದ್ರಕ್ಕೂ
ಹಿಂಭಾಗವನ್ನು ಪಶ್ಚಿಮದ ಸಮುದ್ರಕ್ಕೂ ತಳ್ಳಿಬಿಡುವೆನು. ಅದು ನಿಮಗೆ ಮಾಡಿದ ಘೋರ ದುಷ್ಕೃತ್ಯಗಳಿಗಾಗಿ
ದಂಡಿಸುವೆನು. ಅದರ ಹೆಣಗಳ ದುರ್ವಾಸನೆ ಏರುವುದು; ಗಬ್ಬು ನಾರುವುದು."

21 "ಭೂನಿವಾಸಿಗಳೇ, ಭಯಪಡಬೇಡಿರಿ; ಹರ್ಷಿಸಿ ಆನಂದಿಸಿರಿ. ಸರ್ವೇಶ್ವರ
ಮಹತ್ಕಾರ್ಯಗಳನ್ನು ಎಸಗಿದ್ದಾರೆ. 22ಭೂಜಂತುಗಳೇ ಅಂಜಬೇಡಿ, ವನವೃಕ್ಷಗಳು
ಫಲಭರಿತವಾಗಿರುವುವು; ಅಂಜೂರ, ದ್ರಾಕ್ಷಿಗಳೆಲ್ಲವೂ ತುಂಬಿ ತುಳುಕುವುವು.

23 "ಸಿಯೋನಿನ ಜನರೇ, ಹರ್ಷಿಸಿರಿ; ಸ್ವಾಮಿ ದೇವರಾದ ಸರ್ವೇಶ್ವರ ನಿಮಗೆ ಮಾಡಿದ
ಉಪಕಾರಗಳಿಗಾಗಿ ಆನಂದಿಸಿರಿ. ನಿಮಗೆ ಅವರು ಮುಂಗಾರು ಮಳೆಯನ್ನು ಸಾಕಷ್ಟು ಕೊಡುವರು;
ಮುಂಗಾರು ಹಿಂಗಾರು ಮಳೆಗಳನ್ನು ವಾಡಿಕೆಯಂತೆ ಸಮೃದ್ಧಿಯಾಗಿ ಸುರಿಸುವರು. 24ಕಣಗಳಲ್ಲಿ ಗೋದಿ
ರಾಶಿರಾಶಿಯಾಗಿರುವುದು. ತೊಟ್ಟಿಗಳಲ್ಲಿ ದ್ರಾಕ್ಷಾರಸ, ತೈಲಗಳು ತುಂಬಿರುವುವು. 25ಗುಂಪು ಮಿಡತೆ, ಕಂಬಳಿ

ಮಿಡತೆ, ಚೂರಿ ಮಿಡತೆ, ನಾನು ಕಳುಹಿಸಿದ ಈ ಮಿಡತೆಗಳ ಸೈನ್ಯಗಳು ತಿಂದು ನಷ್ಟಮಾಡಿದ ವರ್ಷಗಳನ್ನು ನಿಮಗೆ ಭರಿಸಿಕೊಡುವೆನು. 26ನೀವು ಹೊಟ್ಟೆ ತುಂಬ ಊಟಮಾಡಿ ತೃಪ್ತರಾಗುವಿರಿ; ನಿಮಗಾಗಿ ಮಹತ್ಕಾರ್ಯಗಳನ್ನು ಎಸಗಿದ ದೇವರಾದ ಸರ್ವೇಶ್ವರಸ್ವಾಮಿಯ ನಾಮವನ್ನು ಕೊಂಡಾಡುವಿರಿ; ನನ್ನ ಜನರಿಗೆ ಎಂದಿಗೂ ಆಶಾಭಂಗವಾಗದು. 27ನಾನೇ ಇಸ್ರಯೇಲಿನ ಮಧ್ಯೆ ನೆಲೆಯಾಗಿ ಇರುವವನು. ನಾನೇ ನಿಮ್ಮ ಸರ್ವೇಶ್ವರನಾದ ದೇವರು; ನಾನಲ್ಲದೆ ಬೇರೆ ದೇವರು ನಿಮಗಿಲ್ಲ. ನನ್ನ ಜನರಿಗೆ ಎಂದಿಗೂ ಆಶಾಭಂಗವಾಗದು ಎಂದು ನಿಮಗೆ ಮನದಟ್ಟಾಗುವುದು.

## ಪವಿತ್ರಾತ್ಮ ಪ್ರವಾಹ

28 "ತರುವಾಯ ಎಲ್ಲಾ ಮಾನವರ ಮೇಲೆ ನನ್ನ ಆತ್ಮವನ್ನು ಸುರಿಸುವೆನು; ಪುತ್ರಪುತ್ರಿಯರು ಪ್ರವಾದನೆ ಮಾಡುವರು; ನಿಮ್ಮ ಹಿರಿಯರು ಸ್ವಪ್ನಶೀಲರಾಗುವರು; ನಿಮ್ಮ ಯುವಕರಿಗೆ ದಿವ್ಯದರ್ಶನಗಳಾಗುವುವು. 29ಆ ದಿನಗಳಲ್ಲಿ ದಾಸದಾಸಿಯರ ಮೇಲೂ ನನ್ನ ಆತ್ಮವನ್ನು ಸುರಿಸುವೆನು. 30ಭೂಮ್ಯಾಕಾಶಗಳಲ್ಲಿ ಸೂಚಕ ಕಾರ್ಯಗಳನ್ನು ಮಾಡುವೆನು. ರಕ್ತಧಾರೆ, ಅಗ್ನಿಪ್ರಳಯ, ಧೂಮಕೇತು ಕಾಣಿಸುವಂತೆ ಮಾಡುವೆನು. 31ಸರ್ವೇಶ್ವರಸ್ವಾಮಿಯ ಭಯಂಕರ ಮಹಾದಿನದ ಮುಂಚೆ ಸೂರ್ಯನು ಅಂಧಕಾರಮಯನಾಗುವನು; ಚಂದ್ರನು ರಕ್ತಗೆಂಪಾಗುವನು. 32ಆದರೆ ಸರ್ವೇಶ್ವರಸ್ವಾಮಿಯ ನಾಮಸ್ಮರಣೆ ಮಾಡುವವರೆಲ್ಲರೂ ಜೀವೋದ್ಧಾರವನ್ನು ಪಡೆಯುವರು. ಅವರೇ ತಿಳಿಸಿರುವಂತೆ ಸಿಯೋನ್ ಪರ್ವತದಲ್ಲೂ ಜೆರುಸಲೇಮಿನಲ್ಲೂ ಅನೇಕರಿಗೆ ಮುಕ್ತಿ ದೊರಕುವುದು. ಅಳಿದುಳಿದವರಲ್ಲಿ ಆ ಸ್ವಾಮಿಯ ಕರೆಹೊಂದಿವರು ಬದುಕುವರು."

## ರಾಷ್ಟ್ರಗಳಿಗೆ ನ್ಯಾಯತೀರ್ಪು

**3** ಸರ್ವೇಶ್ವರಸ್ವಾಮಿಯ ನುಡಿಯಿದು: "ಆ ದಿನಗಳಲ್ಲಿ ಜುದೇಯ ಹಾಗೂ ಜೆರುಸಲೇಮಿನ ಸಿರಿಸಂಪತ್ತನ್ನು ಮರಳಿ ಕೊಡುವೆನು. 2ಎಲ್ಲಾ ರಾಷ್ಟ್ರಗಳನ್ನು ನ್ಯಾಯತೀರ್ಪಿನ ಜೊಸೆಫಾತ್ ಕಣಿವೆಗೆ ಬರಮಾಡುವೆನು. ನನ್ನ ಪ್ರಜೆಯೂ ಸ್ವಜನರೂ ಆದ ಇಸ್ರಯೇಲರಿಗೆ ಅವರು ಮಾಡಿದ ಹಿಂಸೆಗಾಗಿ ನ್ಯಾಯಕೇಳುವೆನು. ಅವರು ನನ್ನ ಪ್ರಜೆಯನ್ನು ದೇಶವಿದೇಶಗಳಿಗೆ ಚದರಿಸಿದ್ದಾರೆ. ನನ್ನ ನಾಡನ್ನು ಹಂಚಿಕೊಂಡಿದ್ದಾರೆ. 3ನನ್ನ ಜನರಿಗಾಗಿ ಚೀಟುಹಾಕಿದ್ದಾರೆ. ವೇಶ್ಯಾಚಾರಕ್ಕಾಗಿ, ಮದ್ಯಪಾನಕ್ಕಾಗಿ, ಗಂಡುಮಕ್ಕಳನ್ನೂ ಹೆಣ್ಣುಮಕ್ಕಳನ್ನೂ ಮಾರಾಟ ಮಾಡಿದ್ದಾರೆ.

4 "ಟೈರ್, ಸಿದೋನ್ ಮತ್ತು ಫಿಲಿಷ್ಟಿಯ ಪ್ರಾಂತ್ಯಗಳೇ, ನನ್ನ ಮೇಲೆ ನಿಮಗಿರುವ ದೂರು ಯಾವುದು? ನನಗೆ ಪ್ರತೀಕಾರ ಮಾಡಬೇಕೆಂದಿರುವಿರೋ? ಹಾಗೇನಾದರೂ ಮಾಡಿದ್ದೇ ಆದರೆ, ನೀವು ಮಾಡಿದ ಕೇಡನ್ನು ತಡಮಾಡದೆ ನಿಮ್ಮ ತಲೆಗೇ ತರುವೆನು. 5ನನ್ನ ಬೆಳ್ಳಿಬಂಗಾರಗಳನ್ನು, ಅತ್ಯಮೂಲ್ಯವಾದ ಬೊಕ್ಕಸಗಳನ್ನು ದೋಚಿಕೊಂಡು ನಿಮ್ಮ ದೇವಾಲಯಗಳಿಗೆ ಕೊಂಡೊಯ್ದಿದ್ದೀರಿ. 6ಜುದೇಯ ಮತ್ತು ಜೆರುಸಲೇಮಿನ ಜನರನ್ನು ಗ್ರೀಕರಿಗೆ ಮಾರಿಬಿಟ್ಟಿದ್ದೀರಿ; ಅವರನ್ನು ತಾಯ್ನಾಡಿನಿಂದ ದೂರಮಾಡಿದ್ದೀರಿ. 7ಇಂತಿರಲು, ನೀವು ಅವರನ್ನು ಮಾರಿದ ಊರುಗಳಿಂದ ದಂಗೆಯೆದ್ದು ಹೊರಬರುವಂತೆ ಅವರನ್ನು ಹುರಿದುಂಬಿಸುವೆನು. ನೀವು ಮಾಡಿದ ಕೇಡನ್ನು ನಿಮ್ಮ ತಲೆಗೇ ತರುವೆನು. 8ನಿಮ್ಮ ಪುತ್ರಪುತ್ರಿಯರನ್ನು ಯೆಹೂದ್ಯರಿಗೆ ಮಾರುವೆನು. ಅವರು ಆ ಮಕ್ಕಳನ್ನು ದೂರದಲ್ಲಿರುವ ಶೆಬದವರಿಗೆ ಮಾರಿಬಿಡುವರು. ಸರ್ವೇಶ್ವರನಾದ ನನ್ನ ನುಡಿಯಿದು."

9 "ರಾಷ್ಟ್ರಗಳಿಗೆ ಹೀಗೆ ಪ್ರಕಟಿಸಿರಿ: ರಾಷ್ಟ್ರಗಳೇ, ಯುದ್ಧಸನ್ನದ್ಧರಾಗಿರಿ. ಶೂರರನ್ನು ಎಚ್ಚರಗೊಳಿಸಿರಿ; ಯೋಧರೆಲ್ಲರೂ ಒಟ್ಟುಗೂಡಲಿ; ಯುದ್ಧಕ್ಕೆ ಹೊರಡಲಿ. 10ನಿಮ್ಮ ನೇಗಿಲುಗಳನ್ನು ಕುಲುಮೆಗೆ ಹಾಕಿ ಕತ್ತಿಗಳನ್ನಾಗಿ ಮಾಡಿರಿ; ಕುಡುಗೋಲುಗಳನ್ನು ಭರ್ಜಿಗಳನ್ನಾಗಿ ಮಾರ್ಪಡಿಸಿರಿ; ಬಲಹೀನನು ಸಹ ಬಲಾಢ್ಯನಂತೆ ಯುದ್ಧಕ್ಕೆ ನಿಂತುಕೊಳ್ಳಲಿ. 11ಸುತ್ತಮುತ್ತಲಿನ ರಾಷ್ಟ್ರಗಳೇ, ನೀವೆಲ್ಲರೂ ತ್ವರೆಮಾಡಿ ಕೂಡಿಬನ್ನಿ," ಸರ್ವೇಶ್ವರ, ನಿಮ್ಮ ಯೋಧರನ್ನು ರಣರಂಗಕ್ಕೆ ಇಳಿಸಿರಿ.

12 “ರಾಷ್ಟ್ರಗಳು ಎಚ್ಚೆತ್ತು ಸರ್ವೇಶ್ವರ ಸ್ವಾಮಿಯ ನ್ಯಾಯತೀರ್ಪಿನ ಕಣಿವೆಗೆ ಇಳಿಯಲಿ. ಸುತ್ತಮುತ್ತ
ನೆರೆದಿರುವ ರಾಷ್ಟ್ರಗಳಿಗೆ ನ್ಯಾಯ ತೀರಿಸಲು ಅಲ್ಲಿ ನಾನು ಅಸೀನನಾಗಿರುವೆನು. 13ಸ್ವಾಮಿಯ ಶೂರರೇ,
ಕುಡುಗೋಲನ್ನು ಹಾಕಿರಿ; ಫಲ ಪಕ್ವವಾಗಿದೆ. ಬನ್ನಿ, ದ್ರಾಕ್ಷಿಯನ್ನು ತುಳಿಯಿರಿ; ಅಲೆಯು ಭರ್ತಿಯಾಗಿದೆ,
ತೊಟ್ಟಿಗಳು ತುಂಬಿತುಳುಕುತ್ತಿವೆ; ರಾಷ್ಟ್ರಗಳ ದುಷ್ಟತನವು ಮಿತಿಮೀರಿದೆ.

14 “ಇಗೋ, ನ್ಯಾಯತೀರ್ಪಿನ ಕಣಿವೆಯಲ್ಲಿ ತಂಡೋಪತಂಡವಾದ ಜನಸ್ತೋಮ! ತೀರ್ಪಿನ
ಕಣಿವೆಯಲ್ಲಿರುವವರಿಗೆ ಸರ್ವೇಶ್ವರನ ದಿನ ಸನ್ನಿಹಿತ! 15ಸೂರ್ಯಚಂದ್ರಗಳು ಮಂಕಾಗುತ್ತವೆ. ನಕ್ಷತ್ರಗಳು
ಕಾಂತಿಗುಂದುತ್ತವೆ. 16ಸ್ವಾಮಿ ಸಿಯೋನಿನಿಂದ ಗರ್ಜಿಸುತ್ತಾರೆ, ಜೆರುಸಲೇಮಿನಿಂದ ಅವರ ಧ್ವನಿ
ಮೊಳಗುತ್ತದೆ. ಭೂಮ್ಯಾಕಾಶಗಳು ನಡುಗುತ್ತವೆ. ಆದರೂ ಸರ್ವೇಶ್ವರ ತಮ್ಮ ಜನರಿಗೆ ಆಶ್ರಯ;
ಇಸ್ರಯೇಲರಿಗೆ ರಕ್ಷಣಾ ದುರ್ಗ.

**ದೇವಜನರಿಗೆ ದೀರ್ಘಾಶೀರ್ವಾದ**

17 “ಇಸ್ರಯೇಲರೇ, ಕೇಳಿ, ಪವಿತ್ರ ಪರ್ವತವಾದ ಸಿಯೋನಿನಲ್ಲಿ ನೆಲೆಯಾಗಿರುವ ನಿಮ್ಮ
ಸರ್ವೇಶ್ವರಸ್ವಾಮಿ ದೇವರು ನಾನೇ ಎಂದು ಆಗ ನಿಮಗೆ ಮನದಟ್ಟಾಗುವುದು. ಜೆರುಸಲೇಮ್
ಪುಣ್ಯಕ್ಷೇತ್ರವೆನಿಸಿಕೊಳ್ಳುವುದು. ಪರಕೀಯರು ಅದನ್ನೆಂದಿಗೂ ಆಕ್ರಮಿಸರು. 18ಆ ದಿನಗಳಲ್ಲಿ
ಬೆಟ್ಟಗುಟ್ಟಗಳಿಂದ ದ್ರಾಕ್ಷಾರಸ ಮತ್ತು ಹಾಲು ತುಪ್ಪ ಹರಿಯುವುದು. ಜುದೇಯ ನಾಡಿನ ಹಳ್ಳಕೊಳ್ಳಗಳು
ನೀರಿನಿಂದ ತುಂಬಿರುವುವು. ದೇವಾಲಯದಿಂದ ನೀರು ಚಿಮ್ಮಿ ಬಂದು ಆಕಾಚಿಯದ ಹಳ್ಳವನ್ನು
ತಂಪಾಗಿಸುವುದು.

19 “ಈಜಿಪ್ಟ್ ಪಾಳುಬೀಳುವುದು, ಎದೋಮ್ ಬೆಂಗಾಡಾಗುವುದು. ಕಾರಣ, ಈ ಎರಡು
ಪಟ್ಟಣದವರು ಜುದೇಯ ನಾಡಿನ ಮೇಲೆ ಧಾಳಿಮಾಡಿದ್ದಾರೆ. ನಿರ್ದೋಷಿಗಳ ರಕ್ತವನ್ನು ಸುರಿಸಿದ್ದಾರೆ.
20ಹತರಾದವರು ನಿರ್ದೋಷಿಗಳೆಂದು ನಿರ್ಣಯಿಸುವೆನು. ಕೊಲೆಪಾತಕರನ್ನು ದಂಡಿಸಿಯೇ ತೀರುವೆನು.
21ಆದರೆ ಜುದೇಯ ನಾಡು, ಜೆರುಸಲೇಮ್ ನಗರ ಜನಭರಿತವಾಗಿ ಇರುವುದು. ಸರ್ವೇಶ್ವರ ಸ್ವಾಮಿಯಾದ
ನಾನು ಸಿಯೋನ್ ಪರ್ವತದಲ್ಲಿ ನೆಲೆಯಾಗಿರುವೆನು.”